ಕರ್ನಾಟಕ ಸರ್ಕಾರ

( ಕಂದಾಯ ಇಲಾಖೆ )

**ಅಧ್ಯಕ್ಷರು, ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ ಹಾಗೂ ಜಿಲ್ಲಾಧಿಕಾರಿಗಳು,**

**ಮಂಡ್ಯ ಜಿಲ್ಲೆ, ಮಂಡ್ಯ**

# ಅಧಿಸೂಚನೆ

**ಸಂಖ್ಯೆ:ಸಿಬ್ಬಂದಿ(1)ಸಿಆರ್:271/2012-13** **ದಿನಾಂಕ:31-10-2013.**

**ವಿಷಯ:** ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗ ಹುದ್ದೆಗಳನ್ನು ನೇರನೇಮಕಾತಿ ಮೂಲಕ ಭರ್ತಿ ಮಾಡಲು On line ಮೂಲಕ ಅರ್ಜಿಯನ್ನು ಅಹ್ವಾನಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್‌ಡಿ:299:ಬಿಎಸ್‌ಸಿ:2006 ದಿನಾಂಕ: 03-02-2009 ಮತ್ತು 24-07-2009.

2. **"ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರದ"** ಸಭೆಯ ನಡವಳಿ ದಿನಾಂಕ:21-10-2013.

@@@@@

ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಬ್ಯಾಕ್‌ಲಾಗ್ ಹುದ್ದೆ ಸೇರಿದಂತೆ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು **ಕರ್ನಾಟಕ ಸಾಮಾನ್ಯ ನೇಮಕಾತಿ (ಕಂದಾಯ ಅಧೀನ ಶಾಖೆ) (ವೃಂದ ಮತ್ತು ನೇಮಕಾತಿಗಳು) ನಿಯಮಗಳು 1977ರ ನಿಯಮಗಳು** ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ:ಆರ್‌ಡಿ:299:ಬಿಎಸ್‌ಸಿ:2006 ದಿನಾಂಕ:03-02-2009 ಮತ್ತು 24-07-2009 ರನ್ವಯ ನೇರನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On line ಮೂಲಕ ಅರ್ಜಿಯನ್ನು ಅಹ್ವಾನಿಸಲಾಗಿದೆ.

ಅರ್ಜಿ ನಮೂನೆಗಳನ್ನು ಇಲಾಖೆಯ ಅಧಿಕೃತ ವೆಬ್ ಸೈಟ್ ವಿಳಾಸ-http://mandya-va.kar.nic.in ನಲ್ಲಿ ಅಳವಡಿಸಲಾಗಿದೆ. ಅರ್ಜಿಗಳು **ದಿನಾಂಕ:18-11-2013** ರಿಂದ ಸದರಿ ವೆಬ್ ಸೈಟ್‌ನಲ್ಲಿ ಚಾಲನೆಯಲ್ಲಿರುತ್ತದೆ. ಅರ್ಜಿಗಳನ್ನು ಆನ್-ಲೈನ್ ಮುಖಾಂತರ ಮಾತ್ರ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ಅವಕಾಶವಿರುವುದಿಲ್ಲ. **ಅರ್ಜಿಗಳನ್ನು ದಿನಾಂಕ:17-12-2013 ರಂದು ಸಂಜೆ 5.30 ರೊಳಗೆ ಸಲ್ಲಿಸತಕ್ಕದ್ದು.**

## ನಾಡಕಛೇರಿಯ ಗ್ರಾಮಲೆಕ್ಕಿಗರ ಬ್ಯಾಕ್ ಲಾಗ್ ಹುದ್ದೆ.

**(ಅಧಿಸೂಚನೆ ಸಂಖ್ಯೆ:ಸಿಬ್ಬಂದಿ(1)ಸಿಆರ್:74/2012-13 ದಿನಾಂಕ:16-07-2012)**

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 01 | ಗ್ರಾಮಲೆಕ್ಕಿಗರು | 01 | ದ್ವಿತೀಯ ಪಿ.ಯು.ಸಿ ಅಥವಾ 12 ನೇ ತರಗತಿ (12th Standrad Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಗಣಕಯಂತ್ರ ಜ್ಞಾನದ ತಿಳಿವಳಿಕೆ ಬಗ್ಗೆ ಪ್ರಮಾಣ ಪತ್ರ. | 11600-21000 |

## ವರ್ಗೀಕರಣ

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| 01 | ಗ್ರಾಮ ಲೆಕ್ಕಿಗ | 01 | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ | ಕ.ಮಾ.ಅ | ಯೋ.ನಿ.ರಾ | ಒಟ್ಟು |
| | | | ಪ.ಜಾ | – | – | – | – | 01 | – | – | 01 |
| | | | ಪ.ಪಂ | – | – | – | – | – | – | – | – |
| | | | ಪ್ರ––1 | – | – | – | – | – | – | – | – |
| | | | ಪ್ರ–2ಎ | – | – | – | – | – | – | – | – |
| | | | ಪ್ರ–2ಬಿ | | – | – | – | – | – | – | – |
| | | | ಪ್ರ–3ಎ | – | – | – | – | – | – | – | – |
| | | | ಪ್ರ–3ಬಿ | – | – | – | – | – | – | – | – |
| | | | ಸಾಮಾನ್ಯ ಅಭ್ಯರ್ಥಿ | – | – | – | – | – | – | – | – |
| | | 01 | ಒಟ್ಟು | – | – | – | – | 01 | – | – | 01 |

## ಗ್ರಾಮ ಲೆಕ್ಕಿಗ/ನಾಡಕಛೇರಿ ಗ್ರಾಮಲೆಕ್ಕಿಗರ ಹುದ್ದೆಗಳು

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 01 | ಗ್ರಾಮಲೆಕ್ಕಿಗರು | 89 | ದ್ವಿತೀಯ ಪಿ.ಯು.ಸಿ ಅಥವಾ 12 ನೇ ತರಗತಿ (12th **Standrad Examination conducted by Central Board of Secondary Education or ICSE)** ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಗಣಕಯಂತ್ರ ಜ್ಞಾನದ ತಿಳಿವಳಿಕೆ ಬಗ್ಗೆ ಪ್ರಮಾಣ ಪತ್ರ. | 11600–21000 |

ವರ್ಗೀಕರಣ

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| 01 | ಗ್ರಾಮ ಲೆಕ್ಕಿಗ | 89 | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ | ಕ.ಮಾ.ಅ | ಯೋ.ನಿ.ರಾ | ಒಟ್ಟು |
| | | | ಪ.ಜಾ | 02 | 04 | 04 | 01 | 01 | 01 | 00 | 13 |
| | | | ಪ.ಪಂ | 01 | 01 | 01 | 00 | 00 | 00 | 00 | 03 |
| | | | ಪ್ರ––1 | 01 | 01 | 02 | 00 | 00 | 00 | 00 | 04 |
| | | | ಪ್ರ–2ಎ | 02 | 04 | 04 | 01 | 01 | 01 | 00 | 13 |
| | | | ಪ್ರ–2ಬಿ | 01 | 01 | 02 | 00 | 00 | 00 | 00 | 04 |
| | | | ಪ್ರ–3ಎ | 01 | 01 | 02 | 00 | 00 | 00 | 00 | 04 |
| | | | ಪ್ರ–3ಬಿ | 01 | 01 | 01 | 00 | 01 | 00 | 00 | 04 |
| | | | ಸಾಮಾನ್ಯ ಅಭ್ಯರ್ಥಿ | 09 | 13 | 11 | 02 | 05 | 02 | 02 | 44 |
| | | | ಒಟ್ಟು | 18 | 26 | 27 | 04 * | 08 | 04 | 02 | 89 |

* ಅಂಗವಿಕಲ ಕೋಟಾದಡಿ ಮೀಸಲಿಟ್ಟಿರುವ ಹುದ್ದೆಗಳಿಗೆ ಈ ಕೆಳಕಂಡ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ.

ರೋಸ್ಟರ್ ಪಾಯಿಂಟ್

| | |
|---|---|
| 24 | ಪರಿಶಿಷ್ಠ ಜಾತಿ. |
| 24 | ಪ್ರವರ್ಗ–2ಎ |
| 84 | ಸಾಮಾನ್ಯ ಅಭ್ಯರ್ಥಿ |
| 04 | ಸಾಮಾನ್ಯ ಅಭ್ಯರ್ಥಿ |

1) ಅಂ.ವಿ–ಅಂಗವಿಕಲರು. 2) ಮಾ.ಸೈ–ಮಾಜಿ ಸೈನಿಕರು
3) ಕ.ಮಾ.ಅ–ಕನ್ನಡ ಮಾಧ್ಯಮ ಅಭ್ಯರ್ಥಿ 4) ಯೋ.ನಿ.ರಾ–ಯೋಜನಾ ನಿರಾಶ್ರಿತರು

**ವಿದ್ಯಾರ್ಹತೆ:–** ದ್ವಿತೀಯ ಪಿ.ಯು.ಸಿ ಅಥವಾ 12 ನೇ ತರಗತಿ (12th Standard Examination conducted by Central Board of Secondary Education or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಮತ್ತು ಗಣಕಯಂತ್ರ ಜ್ಞಾನದ ಬಗ್ಗೆ ಪ್ರಮಾಣ ಪತ್ರ.

**ವೇತನಶ್ರೇಣಿ:–** 11600–200–12000–250–13000–300–14200–350–15600–400–17200–450–19000–500–21000

**ಅರ್ಜಿ ಶುಲ್ಕ:–** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ –1 ಹಾಗೂ ಮಹಿಳೆಯರಿಗೆ ರೂ 100–00 ಸಾಮಾನ್ಯ ಅಭ್ಯರ್ಥಿಗಳು ರೂ 200–00 ಶುಲ್ಕವನ್ನು, ಮತ್ತು ಬ್ಯಾಂಕ್ ಕಮಿಷನ್ ಶುಲ್ಕ 25–00 ರೂಗಳನ್ನು ವೆಬ್ ಸೈಟ್ ವಿಳಾಸ– **http://mandya-va.kar.nic.in** ನಲ್ಲಿ ಲಭ್ಯವಾಗುವ ಚಲನ್ನಿನ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ರಾಜ್ಯದ ಯಾವುದಾದರೂ **ಸ್ಟೇಟ್ ಬ್ಯಾಂಕ್ ಆಫ್ ಮೈಸೂರು** ಬ್ಯಾಂಕಿನಲ್ಲಿ **A/c No.64050199087 SBM ADB Branch MANDYA.** ಈ ಖಾತೆಗೆ ಪಾವತಿಸಿ, ಸ್ವೀಕೃತಿಯನ್ನು ಪಡೆಯಬೇಕು. **ದಿನಾಂಕ:17–12–2013 ರೊಳಗೆ ಅರ್ಜಿ ಸಲ್ಲಿಸಿ, ಹಣ ಪಾವತಿಸಿದ ಅಭ್ಯರ್ಥಿಗಳು ದಿನಾಂಕ:19–12–2013 ರಂದು ಸಂಜೆ 5.30 ರೊಳಗೆ On line ಮುಖಾಂತರ ಚಲನ್‌ನ ಕೌಂಟರ್ ಫೈಲ್‌ನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡುವುದು,**

**<u>ಅಭ್ಯರ್ಥಿಗಳಿಗೆ ಸೂಚನೆ ಮತ್ತು ಷರತ್ತುಗಳು:</u>**

1. **ಅರ್ಜಿಗಳನ್ನು ಆನ್‌ಲೈನ್ ಮೂಲಕ ಮಾತ್ರ ಹಾಕತಕ್ಕದ್ದು.** ಅಂಚೆ ಅಥವಾ ಕೊರಿಯರ್ ಅಥವಾ ಖುದ್ದಾಗಿ ಸ್ವೀಕರಿಸಲಾಗುವುದಿಲ್ಲ.
2. **ವಯೋಮಿತಿ: ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದಂದು ಕೆಳಕಂಡ ವಯೋಮಿತಿ ಹೊಂದಿರತಕ್ಕದ್ದು.**

| | | | |
|---|---|---|---|
| ಪ.ಜಾ / ಪ.ಪಂ., ಪ್ರವರ್ಗ-1 | : | ಕನಿಷ್ಠ-18 | ಗರಿಷ್ಠ - 40 |
| ಹಿಂದುಳಿದ ವರ್ಗ | : | ಕನಿಷ್ಠ-18 | ಗರಿಷ್ಠ - 38 |
| ಸಾಮಾನ್ಯ ವರ್ಗ | : | ಕನಿಷ್ಠ-18 | ಗರಿಷ್ಠ - 35 |

**ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸುವಷ್ಟರ ಮಟ್ಟಿಗೆ ನಿಗಧಿಪಡಿಸಿದೆ.**

ಅ) ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷ ಗಳಾಗುವುದೋ ಅಷ್ಟು ವರ್ಷಗಳು.

ಆ) ಅಭ್ಯರ್ಥಿಯು ಅಂಗವಿಕಲನಾಗಿದ್ದರೆ 10 ವರ್ಷಗಳು

ಇ) ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ 10 ವರ್ಷಗಳು

3.ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.

4.ಅಭ್ಯರ್ಥಿಗಳಿಗೆ ಗಣಕಯಂತ್ರದ ಬಗ್ಗೆ ಜ್ಞಾನವಿರಬೇಕು ಮತ್ತು ಪ್ರಮಾಣ ಪತ್ರ ಹಾಜರ್ ಪಡಿಸಬೇಕು.

5. ನಿಗದಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.

6.ಸರ್ಕಾರಿ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಭರ್ತಿ ಮಾಡಿದ ಅರ್ಜಿ ಪ್ರತಿಯನ್ನು ನೇಮಕಾತಿ ಪ್ರಾಧಿಕಾರ / ಇಲಾಖಾ ಮುಖ್ಯಸ್ಥರ ಮುಖಾಂತರ ಅರ್ಜಿಯನ್ನು ಸಲ್ಲಿಸುವುದು.

7. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8.ಅರ್ಜಿದಾರರೂಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

9. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

10. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ರವರು ಕಾಯ್ದಿರಿಸಿಕೊಂಡಿರುತ್ತಾರೆ.

11.ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಆಧಾರದ ಮೇಲೆ ಮಾತ್ರ ಪರಿಗಣಿಸಲಾಗುವುದು.

12. **ಜಾತಿ / ಮೀಸಲಾತಿ ಪ್ರಮಾಣ ಪತ್ರಗಳು: -** ಮೀಸಲಾತಿ ಸೌಲಭ್ಯ ಅಪೇಕ್ಷಿಸುವ ಅಭ್ಯರ್ಥಿಗಳು ಈ ಕೆಳಕಂಡ ಮೂಲ ದಾಖಲೆಗಳನ್ನು ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ರೆವಿನ್ಯೂ ಪ್ರಾಧಿಕಾರದಿಂದ (ಸಂಬಂಧಪಟ್ಟ ತಹಸೀಲ್ದಾರ್ ರಿಂದ) ಪಡೆದು ಪರಿಶೀಲನಾ ದಿನಾಂಕದಂದು ಹಾಜರುಪಡಿಸಬೇಕು .

**ಪ.ಜಾ / ಪ.ಪಂ.** * ನಮೂನೆ- **ಡಿ** ಯಲ್ಲಿ, **ಪ್ರವರ್ಗ -1 :** * ನಮೂನೆ- **ಇ** ಯಲ್ಲಿ

**ಪ್ರವರ್ಗ 2ಎ, 2ಬಿ, 3ಎ, 3ಬಿ :** * ನಮೂನೆ- **ಎಫ್** ನಲ್ಲಿ ಸಂಬಂಧಪಟ್ಟ ತಹಸೀಲ್ದಾರ್ ರವರಿಂದ **ಚಾಲ್ತಿಯಲ್ಲಿರುವ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು**

13. **ಯೋಜನೆ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು:**

ಯೋಜನಾ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿಡಲಾದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂದಿಸಿದ ತಹಸೀಲ್ದಾರ್ ರವರು ನೀಡಿದ ಪ್ರಮಾಣ ಪತ್ರಗಳನ್ನು ಪಡೆದಿರಬೇಕು

14. **ಮಾಜಿ ಸೈನಿಕರ ಕುಟುಂಬದ ಅಭ್ಯರ್ಥಿಗಳು :**

ಮಾಜಿ ಸೈನಿಕರು ಎನ್ನುವ ಬಗ್ಗೆ ಅಥವಾ ಭಾರತ ದೇಶದ ಒಕ್ಕೂಟ ಸಶಸ್ತ್ರ ದಳದಲ್ಲಿ ಸೇವೆ ಸಲ್ಲಿಸುತ್ತಿರುವಾಗ ಮರಣ ಹೊಂದಿದ ಅಥವಾ ಶಾಶ್ವತವಾಗಿ ಅಂಗಹೀನರಾದ ವ್ಯಕ್ತಿಗಳ ಕುಟುಂಬದ ಸದಸ್ಯರು ಎಂಬ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿ ಗಳಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

15. **ಅಂಗವಿಕಲ ಅಭ್ಯರ್ಥಿಗಳು** :ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977ರ ನಿಯಮ 9(1-ಎ) ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್ ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರ ಶೇಕಡಾ 5ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ :54: ಸೆನೆನಿ 2012 ದಿನಾಂಕ:23-06-2012 ರೀತ್ಯಾ, ಗ್ರಾಮ ಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿ ಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ.

1.ಕುಷ್ಟರೋಗದಿಂದ ಗುಣಮುಖರಾದವರು (Leprosy cured)

2.ಶ್ರವಣ ದೋಷವುಳ್ಳವರು (Hearing impaired)

3.ಚಲನವಲನ ವೈಕಲ್ಯ (Locomotor disability or cerebral paslsy)

4.ಮಾನಸಿಕ ಅಸ್ವಸ್ಥತೆ (Mentally ill)

ಸರ್ಕಾರದ ಅಧಿಕೃತ ಜ್ಞಾಪನ ಸಂ:ಸಿಆಸುಇ 128 ಸೆನೆನಿ 2005 ದಿನಾಂಕ19-11-2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಕೊಂಡಿರತಕ್ಕದ್ದು. ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಈ ಪ್ರಮಾಣ ಪತ್ರದ ನಮೂನೆಯನ್ನು ಲಗತ್ತಿಸಿದೆ.

16. **ಗ್ರಾಮೀಣ ಅಭ್ಯರ್ಥಿಗಳು :**

ಗ್ರಾಮೀಣ ಅಭ್ಯರ್ಥಿ ಎಂದರೆ, ಒಂದು ಹುದ್ದೆಗಾಗಿ ನಿಯಮಿಸಲಾದ ಅರ್ಹತಾ ಪರೀಕ್ಷೆಯು ಎಸ್. ಎಸ್.ಎಲ್.ಸಿ ಅಥವಾ ಉನ್ನತ ಪರೀಕ್ಷೆಯಾಗಿದ್ದಲ್ಲಿ 1ನೇ ತರಗತಿಯಿಂದ 10 ನೇ ತರಗತಿಯವರೆಗೆ ವ್ಯಾಸಂಗದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪ್ರಾಧಿಕಾರಿಯಿಂದ ದೃಡೀಕೃತ ಗ್ರಾಮೀಣ ಧೃಡೀಕರಣ ಪತ್ರವನ್ನು ಪಡೆದಿರಬೇಕು ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು

ಪಡೆಯಲು ಅರ್ಹರು, ಗ್ರಾಮೀಣ ಅಭ್ಯರ್ಥಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂದಪಟ್ಟ ತಹಸೀಲ್ದಾರ್ ರವರಿಂದ ಪಡೆದು,. ಅಂತೆಯೆ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2ರಲ್ಲಿ ನಿಗಧಿತ ಪ್ರಾದಿಕಾರಿಗಳಿಂದ ಪಡೆದು ಸಂಬಂದಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲು ರುಜು ಮತ್ತು ಮೊಹರು ಮಾಡಿಸಿರಬೇಕು

**17. ಕನ್ನಡ ಮಾಧ್ಯಮ ಅಭ್ಯರ್ಥಿಗಳು.**

ಸರ್ಕಾರದ ಅಧಿಸೂಚನೆ ಸಂ: ಡಿಪಿಎಆರ್ 71 ಎಸ್ ಆರ್ ಆರ್ 2001 ದಿ: 24.10.2002 ರಲ್ಲಿ ಹೊರಡಿಸಿರುವ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9) (1) (ಸಿ) ರನ್ವಯ ಅಭ್ಯರ್ಥಿಯು 1ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಮಾಡಿದ ಪ್ರಮಾಣ ಪತ್ರವನ್ನು ಪಡೆದಿರಬೇಕು

**18. ಅರ್ಹತಾ ಷರತ್ತುಗಳು :**

ಅ) ಭಾರತೀಯ ನಾಗರೀಕನಾಗಿರತಕ್ಕದ್ದು.

ಆ) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು. ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟುಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

ಇ) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ಆಯ್ಕೆ ಪ್ರಾಧಿಕಾರ/ರಾಜ್ಯ ಸರ್ಕಾರ ಕಾಯ್ದಿರಿಸಿಕೊಂಡಿದೆ ಮತ್ತು ಆಯ್ಕೆ ಪ್ರಾಧಿಕಾರದ ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. ನಿಗಧಿತ ಶೈಕ್ಷಣಿಕ ಅರ್ಹತೆ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರಬೇಕು.

**19. ಕೆಳಕಂಡ ಮೂಲ ದಾಖಲೆಗಳನ್ನು ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕು.**

*. ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ ಮತ್ತು ಕಂಪ್ಯೂಟರ್ ಜ್ಞಾನದ ಬಗ್ಗೆ ಪ್ರಮಾಣ ಪತ್ರದ ದಾಖಲೆ .

* ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ / ವರ್ಗಾವಣೆ ಪ್ರಮಾಣ ಪತ್ರ / ಜನ್ಮ ದಿನಾಂಕವನ್ನು ತೋರಿಸುವ ಶೈಕ್ಷಣಿಕ ಸಂಚಿತ ದಾಖಲೆಯ ಉಧೃತ ಭಾಗ.

* ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)

* ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ, ಪ್ರವರ್ಗ-1, ಪ್ರವರ್ಗ -2ಎ, ಪ್ರವರ್ಗ -2ಬಿ, ಪ್ರವರ್ಗ- 3ಎ, 3ಬಿ, ಗಳ ಪ್ರಮಾಣ ಪತ್ರಗಳು (ಮೀಸಲಾತಿ ಕೋರಿದ್ದಲ್ಲಿ ).

* ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ ).
* ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
* ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ ).
* ಯೋಜನೆಗಳಿಂದ ನಿರಾಶ್ರಿತರಾದ ಬಗ್ಗೆ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
* ವಿಧವೆಯಾದಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

ಮೇಲ್ಕಂಡಂತೆ ನಿಗದಿಪಡಿಸಿದ ಎಲ್ಲಾ ದಾಖಲೆಗಳನ್ನು **ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಸಕ್ಷಮ ಪ್ರಾಧಿಕಾರಗಳಿಂದ ಪಡೆದಿರಬೇಕು ಮತ್ತು** ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಮಾತ್ರ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಮೂಲ ದಾಖಲೆಗಳನ್ನು ಹಾಜರ್‌ಪಡಿಸತಕ್ಕದ್ದು.

**20. ಇತರೆ ಸೂಚನೆಗಳು :**

1) ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.
2) ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೇ ದಿನವು ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.
3) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿ ಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
4) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್ ಸೈಟ್‌ನಲ್ಲಿ ತಿಳಿಸಿರುವ ಸೂಚನೆಗಳನ್ನು ಪಾಲಿಸುವುದು.
5) ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯ ಹಕ್ಕು ದೊರೆಯುವುದಿಲ್ಲ.
6) ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸತಕ್ಕದ್ದು.

    1) ಇ-ಮೇಲ್ :vamandya!@gmail.com
    2) ದೂರವಾಣಿ :08232-231215
    3) ಫಾಕ್ಸ್ ನಂ : 08232-221417

**ಅಧ್ಯಕ್ಷರು,**
**ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ**
**ಹಾಗೂ ಜಿಲ್ಲಾಧಿಕಾರಿ,ಮಂಡ್ಯ ಜಿಲ್ಲೆ.**

**ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬಹುಮಹಡಿಗಳ ಕಟ್ಟಡ ಬೆಂಗಳೂರು.
2. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು
3. ಮಹಾಲೇಖಪಾಲರು( ಎ ಮತ್ತು ಇ) ಕರ್ನಾಟಕ, ಬೆಂಗಳೂರು.

4.ಪ್ರಾದೇಶಿಕ ಆಯುಕ್ತರು, ಮೈಸೂರುವಿಭಾಗ ಮೈಸೂರು.

5.ಸಂಕಲನಕಾರರು, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜ್
ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-560059
ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ, ಈಧಿಸೂಚನೆಯನ್ನು
ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು,
ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಒದಗಿಸಲು ಕೋರಿದೆ.

6.ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು

7.ಪ್ರಾಂಶುಪಾಲರು, ಜಿಲ್ಲಾ ತರಬೇತಿ ಸಂಸ್ಥೆ, ಮಂಡ್ಯ

8.ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಮಂಡ್ಯ

9.ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ,ಮಂಡ್ಯ

10. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂಡ್ಯ

11. ಉಪವಿಭಾಗಾಧಿಕಾರಿಗಳು, ಮಂಡ್ಯ/ಪಾಂಡವಪುರ ಉಪವಿಭಾಗ ಇವರಿಗೆ ಕಳುಹಿಸುತ್ತಾ,
ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.

12. ಜಿಲ್ಲೆಯ ಎಲ್ಲಾ ತಹಸೀಲ್ದಾರ್, ರವರಿಗೆ ಕಳುಹಿಸುತ್ತಾ ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ
ಪ್ರಕಟಿಸಲು ತಿಳಿಸಿದೆ.

13. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ

14. ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ

**ಅಧ್ಯಕ್ಷರು**
**ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ**
**ಹಾಗೂ ಜಿಲ್ಲಾಧಿಕಾರಿ,ಮಂಡ್ಯ ಜಿಲ್ಲೆ..**